**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ :- ಸಚಿವಾಲಯದ ಹಂತದಲ್ಲಿ ಕನ್ನಡ ಅನುಷ್ಠಾನ ವಿಭಾಗವನ್ನು ರಚಿಸುವ ಬಗ್ಗೆ

ಓದಲಾಗಿದೆ :

ದಿನಾಂಕ 31-10-2001 ರಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಬರೆದಿರುವ ಅರೆ ಸರ್ಕಾರಿ ಪತ್ರದ ಸಂಖ್ಯೆ : ಕ.ಅ.ಪ್ರಾ/ ಅ/ 461/2001

ಪ್ರಸ್ತಾವನೆ :

ದಿನಾಂಕ 31-10-2001ರ ತಮ್ಮ ಅರೆ ಸರ್ಕಾರಿ ಪತ್ರದಲ್ಲಿ, ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಕನ್ನಡ ಅನುಷ್ಠಾನ ವಿಭಾಗವನ್ನು ತೆರೆದಿರುವಂತೆಯೇ ಸಚಿವಾಲಯ ಮಟ್ಟದಲ್ಲಿ ಕನ್ನಡ ಅನುಷ್ಠಾನದ ಜವಾಬ್ದಾರಿ ಮತ್ತು ಸಮನ್ವಯ ಕೆಲಸಗಳಿಗೆ ಕನ್ನಡ ಅನುಷ್ಠಾನ ವಿಭಾಗವನ್ನು ತೆರೆಯುವಂತೆ ಕೋರಿದ್ದಾರೆ. ಸಚಿವಾಲಯದ ಹಂತದ ಕನ್ನಡ ಅನುಷ್ಠಾನ ವಿಭಾಗಕ್ಕೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮುಖ್ಯಸ್ಥರಾಗಿದ್ದು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ, ಶಿಕ್ಷಣ ಇಲಾಖೆಯ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ, ಕಾನೂನು ಇಲಾಖೆಯ ಮತ್ತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಕಾರ್ಯದರ್ಶಿಗಳು ಸದಸ್ಯರಾಗಿರಬಹುದೆಂದು ತಿಳಿಸಿದ್ದಾರೆ. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಸಲಹೆಗಳನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಲಾಗಿದೆ.

ಸರ್ಕಾರದ ಆದೇಶದ ಸಂಖ್ಯೆ : ಸಿಆಸುಇ 102 ಕತವ 2001

ಬೆಂಗಳೂರು, ದಿನಾಂಕ : 8-2-2002.

ಕರ್ನಾಟಕ ಸರ್ಕಾರ ಸಚಿವಾಲಯದ ಹಂತದಲ್ಲಿ ಕನ್ನಡ ಅನುಷ್ಠಾನದ

ಜವಾಬ್ದಾರಿ ಮತ್ತು ಸಮನ್ವಯ ಕಾರ್ಯಗಳನ್ನು ನಿರ್ವಹಿಸಲು ಈ ಕೆಳಕಂಡವರನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ.

| | |
|---|---|
| 1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ | ಅಧ್ಯಕ್ಷರು |
| 2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಪ್ರಧಾನ ಕಾರ್ಯದರ್ಶಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ | ಸದಸ್ಯರು |
| 3. ಸರ್ಕಾರದ ಕಾರ್ಯದರ್ಶಿ ಶಿಕ್ಷಣ ಇಲಾಖೆ | ಸದಸ್ಯರು |
| 4. ಸರ್ಕಾರದ ಕಾರ್ಯದರ್ಶಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ | ಸದಸ್ಯರು |
| 5. ಸರ್ಕಾರದ ಕಾರ್ಯದರ್ಶಿ ಕಾನೂನು ಇಲಾಖೆ | ಸದಸ್ಯರು |
| 6. ಸರ್ಕಾರದ ಪ್ರಧಾನ ಕಾರ್ಯದರ್ಶಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) | ಸದಸ್ಯ ಕಾರ್ಯದರ್ಶಿ |

ಈ ಸಮಿತಿಯ ಹೊಣೆಗಾರಿಕೆಯು ಈ ಕೆಳಕಂಡಂತಿರುತ್ತದೆ :-

1. ಕನ್ನಡ ಅನುಷ್ಠಾನ ವಿಭಾಗವು ಮೂರು ತಿಂಗಳಿಗೊಮ್ಮೆ ಸಚಿವಾಲಯದಲ್ಲಿ ಕನ್ನಡ ಅನುಷ್ಠಾನ ಕೆಲಸಗಳನ್ನು ಪರಿಶೀಲಿಸಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಮಾಹಿತಿ ನೀಡುವುದು.
2. ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಕಾಲಕಾಲಕ್ಕೆ ಶಿಫಾರಸ್ಸು ಮಾಡುವ ಶಿಸ್ತು ಕ್ರಮದ ಪ್ರಕರಣಗಳನ್ನು ತುರ್ತಾಗಿ ಇತ್ಯರ್ಥಗೊಳಿಸಿ, ಸೂಕ್ತ ಕ್ರಮ ಕೈಗೊಳ್ಳಲು ನೆರವಾಗುವುದು.
3. ಕೇಂದ್ರ ಸರ್ಕಾರ ಹಾಗೂ ಅನ್ಯ ರಾಜ್ಯಗಳ ಜೊತೆ ಪತ್ರ ವ್ಯವಹಾರಗಳನ್ನು ಹೊರತುಪಡಿಸಿ, ಉಳಿದ ಎಲ್ಲಾ ಪತ್ರ ವ್ಯವಹಾರಗಳು ಕನ್ನಡದಲ್ಲಿ ಇರುವಂತೆ ನೋಡಿಕೊಳ್ಳುವುದು.

4. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರು, ಈ ಸಮಿತಿಯ ಸಭೆಗಳನ್ನು ಏರ್ಪಡಿಸುವುದಲ್ಲದೆ, ಸಭೆಯ ನಡವಳಿಗಳನ್ನು ಹೊರಡಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಸಹಿ/-

**(ಎಸ್.ಡಿ. ಸುಬ್ರಹ್ಮಣ್ಯ)**
ಸರ್ಕಾರದ ಅದೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ತಪಾಸಣೆ)

ಇವರಿಗೆ :

1. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳು.
2. ಸರ್ಕಾರದ ಎಲ್ಲಾ ಅಪರ, ಜಂಟಿ, ಉಪ ಮತ್ತು ಅಧೀನ ಕಾರ್ಯದರ್ಶಿಗಳು ಹಾಗೂ ಎಲ್ಲಾ ಶಾಖಾಧಿಕಾರಿಗಳು.
3. ಮುಖ್ಯ ಕಾರ್ಯದರ್ಶಿಗಳ : ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ.
4. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
5. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಸಿಬ್ಬಂದಿ) (6 ಪ್ರತಿಗಳೊಂದಿಗೆ ವಾರ್ಷಿಕ ಸಂಗ್ರಹಣೆಯಲ್ಲಿಡಲು)
6. ಶಾಖಾ ರಕ್ಷಾ ಕಡತ : ಹೆಚ್ಚುವರಿ : ಹೆಚ್ಚುವರಿ ಪ್ರತಿ.